G20

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in
ದೂರವಾಣಿ ಸಂಖ್ಯೆ : 080-22212343
ಇ-ಮೇಲ್ ವಿಳಾಸ : director.ahr.kptcl@gmail.com

---

**ಸಂಖ್ಯೆ: ಕವಿಪ್ರನಿನಿ/ಬಿ103/25303/2021-22** **ದಿನಾಂಕ:** 14 FEB 2023

## ಸುತ್ತೋಲೆ

**ವಿಷಯ:** ಅನುಕಂಪದ ಆಧಾರದ ಮೇಲೆ ನೇಮಕಾತಿ ಕುರಿತು ಸ್ಪಷ್ಟೀಕರಣ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 26 ಸೇಅನೇ 2018, ದಿನಾಂಕ: 09.04.2021.
2. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ ಬಿ103/25303/2021-22, ದಿನಾಂಕ: 08.11.2021.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 22 ಸೇಅನೇ 2022, ದಿನಾಂಕ: 25.01.2023.

*****

ವಿಚ್ಛೇದಿತ ಸರ್ಕಾರಿ ನೌಕರರು ಮೃತಪಟ್ಟ ಪ್ರಕರಣಗಳಲ್ಲಿ, ಸದರಿಯವರ ಅವಲಂಬಿತರಿಗೆ ಅನುಕಂಪದ ಆಧಾರದ ನೇಮಕಾತಿ ನೀಡುವ ವಿಷಯದಲ್ಲಿ ಸರ್ಕಾರವು ದಿನಾಂಕ: 25.01.2023 ರ ಸುತ್ತೋಲೆಯಲ್ಲಿ ಸ್ಪಷ್ಟೀಕರಣವನ್ನು ನೀಡಿರುತ್ತದೆ. ಸದರಿ ಸ್ಪಷ್ಟೀಕರಣದ ಪ್ರತಿಯನ್ನು ಈ ಸುತ್ತೋಲೆಗೆ '**ಅನುಬಂಧ**' ಎಂದು ಲಗತ್ತಿಸುತ್ತಾ, ಸದರಿ ಸುತ್ತೋಲೆಯಲ್ಲಿ ನೀಡಿರುವ ಸ್ಪಷ್ಟೀಕರಣದಂತೆ ಕ್ರಮವಹಿಸಲು ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಈ ಮೂಲಕ ಸೂಚಿಸಲಾಗಿದೆ.

**ನಿರ್ದೇಶಕರು**
**(ಆಡಳಿತ ಮತ್ತು ಮಾ.ಸಂ.)**

**ಗೆ:**
1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ ನಿರ್ದೇಶಕರು(ಹಣಕಾಸು)/ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಆರ್.ಹೆಚ್.ಲಕ್ಷ್ಮಿಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.

Annexure to Circular No: KPTCL/B103/25303/2021-22 Dated 14.02.2023


# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ – ೧<br>Part – I | ಬೆಂಗಳೂರು, ಬುಧವಾರ, ೨೫, ಜನವರಿ, ೨೦೨೩(**ಮಾಘ,** ೦೫, ಶಕವರ್ಷ, ೧೯೪೪)<br>BENGALURU, WEDNESDAY, 25, JANUARY, 2023(MAGHA , 05, SHAKAVARSHA, 1944) | ನಂ. ೪೦<br>No. 40 |


## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 22 ಸೇಅನೇ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 25.01.2023.

### <u>ಸು ತ್ತೋ ಲೆ</u>

ವಿಷಯ: ಅನುಕಂಪದ ಆಧಾರದ ಮೇಲೆ ನೇಮಕಾತಿ ಕುರಿತು ಸ್ಪಷ್ಟೀಕರಣ.

****

ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರನ್ವಯ ಸೇವೆಯಲ್ಲಿರುವಾಗಲೇ ಮೃತಪಡುವ ಸರ್ಕಾರಿ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ನಿಯಮಗಳ ನಿಯಮ 2 (1) (ಎ) ಮತ್ತು (ಬಿ)ರಲ್ಲಿ 'ಮೃತ ಸರ್ಕಾರಿ ನೌಕರರ ಅವಲಂಬಿತರು' ಹಾಗೂ 'ಕುಟುಂಬ' ಪದಗಳನ್ನು ವ್ಯಾಖ್ಯಾನಿಸಲಾಗಿದೆ ಹಾಗೂ ನಿಯಮ 3ರಲ್ಲಿ ನೇಮಕಾತಿಗೆ ಅರ್ಹತೆ ಕುರಿತಂತೆ ನಿರ್ದಿಷ್ಟಪಡಿಸಲಾಗಿದೆ. ವಿವಾಹಿತ ಹಾಗೂ ಅವಿವಾಹಿತ ಸರ್ಕಾರಿ ನೌಕರರು ಮೃತಪಟ್ಟ ಸಂದರ್ಭದಲ್ಲಿ ಅನುಕಂಪದ ಆಧಾರದ ನೇಮಕಾತಿ ಪಡೆಯಲು ಅರ್ಹರಾದ ಅವಲಂಬಿತರ ಬಗ್ಗೆ ತಿಳಿಸಲಾಗಿದೆ. ಇದರನ್ವಯ, ವಿವಾಹಿತ ಸರ್ಕಾರಿ ನೌಕರರು ಮೃತಪಟ್ಟ ಸಂದರ್ಭಗಳಲ್ಲಿ ಅವರ ಪತ್ನಿ/ಪತಿ, ಮಗ ಮತ್ತು ಮಗಳು ಹಾಗೂ ಅವಿವಾಹಿತ ಸರ್ಕಾರಿ ನೌಕರರು ಮೃತಪಟ್ಟ ಸಂದರ್ಭಗಳಲ್ಲಿ ಅವರ ಸಹೋದರ/ಸಹೋದರಿ ಅನುಕಂಪದ ಆಧಾರದ ನೇಮಕಾತಿಗೆ ಅರ್ಹರಾಗಿರುತ್ತಾರೆ. ಮುಂದುವರೆದು, ವಿಚ್ಛೇದಿತ ಸರ್ಕಾರಿ ನೌಕರರು ಮೃತಪಟ್ಟ ಸಂದರ್ಭದಲ್ಲಿ, ಅವರ ಪತ್ನಿ/ಪತಿ ಕಾನೂನಾತ್ಮಕವಾಗಿ ಸದರಿ ನೌಕರರಿಂದ ಬೇರ್ಪಡುವುದರಿಂದ, ಅವರಿಗೆ ಅನುಕಂಪದ ಆಧಾರದ ನೇಮಕಾತಿ ನೀಡಲು ಅವಕಾಶವಿರುವುದಿಲ್ಲವಾದರೂ, ವಿಚ್ಛೇದಿತ ನೌಕರರ ಮಕ್ಕಳು ಅವರಿಗೆ ಅಲವಂಬಿತರಾಗಿದ್ದಲ್ಲಿ ಹಾಗೂ ಅವರೊಂದಿಗೆ ವಾಸಿಸುತ್ತಿದ್ದಲ್ಲಿ, ಅವರಿಗೆ ಅನುಕಂಪದ ಆಧಾರದ ನೇಮಕಾತಿಯನ್ನು ನೀಡಬಹುದಾಗಿದೆ. ಆದರೆ, ವಿಚ್ಛೇದಿತ ಸರ್ಕಾರಿ ನೌಕರರು ಮೃತಪಟ್ಟಿದ್ದು, ಅವರಿಗೆ ಮಕ್ಕಳಿಲ್ಲದ ಸಂದರ್ಭಗಳಲ್ಲಿ, ಅವಿವಾಹಿತ ಸರ್ಕಾರಿ ನೌಕರರ ಪ್ರಕರಣಗಳಲ್ಲಿ ಅನ್ವಯವಾಗುವಂತೆ ಅವರ ಸಹೋದರ/ಸಹೋದರಿಗೆ ಅನುಕಂಪದ ಆಧಾರದ ನೇಮಕಾತಿಯನ್ನು ನೀಡಬಹುದೇ ಎಂಬ ಬಗ್ಗೆ ಹಲವು ಇಲಾಖೆಗಳು ಸ್ಪಷ್ಟೀಕರಣ ಕೋರುತ್ತಿವೆ.

ವಿಚ್ಛೇದಿತ ಸರ್ಕಾರಿ ನೌಕರರು ಸೇವೆಯಲ್ಲಿರುವಾಗಲೇ ಮೃತಪಟ್ಟು ಅವರಿಗೆ ಮಕ್ಕಳಿದ್ದಲ್ಲಿ, ಅಂತಹ ಮಕ್ಕಳು ನೌಕರರಿಗೆ ಅವಲಂಬಿತರಾಗಿದ್ದು ಹಾಗೂ ಅವರೊಂದಿಗೆ ವಾಸಿಸುತ್ತಿದ್ದಲ್ಲಿ ಅನುಕಂಪದ ಆಧಾರದ ನೇಮಕಾತಿಗೆ ಅರ್ಹರಾಗುತ್ತಾರೆ. ಇಂತಹ ಸಂದರ್ಭಗಳಲ್ಲಿ ವಿಚ್ಛೇದಿತ ನೌಕರರ ಸಹೋದರ/ಸಹೋದರಿಯು ಅನುಕಂಪದ ಆಧಾರದ ನೇಮಕಾತಿಗೆ ಅರ್ಹರಾಗುವುದಿಲ್ಲ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ವಿಚ್ಛೇದಿತ ಪುರುಷ/ಮಹಿಳಾ ಸರ್ಕಾರಿ ನೌಕರರು ಸೇವೆಯಲ್ಲಿರುವಾಲೇ ಮೃತಪಟ್ಟ ಸಂದರ್ಭಗಳಲ್ಲಿ ಹಾಗೂ ಅವರಿಗೆ ಮಕ್ಕಳಿಲ್ಲದಿದ್ದಲ್ಲಿ, ಅಂತಹ ಸರ್ಕಾರಿ ನೌಕರರನ್ನು ಅವಿವಾಹಿತ ಸರ್ಕಾರಿ ನೌಕರರಿಗೆ ಸಮಾನವಾಗಿ ಪರಿಗಣಿಸಿ, ಮೃತ ನೌಕರರ ಮೇಲೆ ಅವಲಂಬಿತರಾಗಿದ್ದ ಹಾಗೂ ಅವರೊಂದಿಗೆ ವಾಸಿಸುತ್ತಿದ್ದ ಅವರ ಸಹೋದರ/ಸಹೋದರಿಗೆ ನಿಯಮಗಳ ಇತರೆ ಷರತ್ತು/ನಿಬಂಧನೆಗಳನ್ನು ಪೂರೈಸುವ ಷರತ್ತಿಗೊಳಪಟ್ಟು ಅನುಕಂಪದ ಆಧಾರದ ನೇಮಕಾತಿಗೆ ಪರಿಗಣಿಸಬಹುದೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ. ಈ ಅಂಶಗಳು ಅನುಕಂಪದ ಆಧಾರದ ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲಾಗಿರುವ ದಿನಾಂಕ: 09.04.2021ರಿಂದ ಅನ್ವಯವಾಗುತ್ತವೆ.

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE Digitally signed by SUNIL GARDE